**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಟಿ.ಎ. ಶರವಣ ಇವರು ನಿಯಮ 72 ರ ಮೇರೆಗೆ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ:-**

**ವಿಷಯ**:- ಆರ್ಥಿಕ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆಯ ನಡುವೆ ಸಮನ್ವಯ ಕೊರತೆಯಿಂದಾಗಿ ಮಾನ್ಯ ಮುಖ್ಯಮಂತ್ರಿಗಳು ಅನುಮೋದಿಸಿ ಆರ್ಥಿಕ ಇಲಾಖೆಯು ವಿಶೇಷ ಅನುದಾನ ಬಿಡುಗಡೆ ಮಾಡದೆ ಸಂಬಂಧಪಟ್ಟ ಇಲಾಖೆಗೆ ಆರ್ಥಿಕ ಇಲಾಖೆಯಿಂದ ಧ್ವಂದ ನೀತಿಯ ಮೂರು ಹಿಂಬರಹಗಳನ್ನು ಒಂದೊಂದು ರೀತಿಯಲ್ಲಿ ಹೇಳಿರುವುದರಿಂದ ಕಳೆದ ಎರಡು ವರ್ಷಗಳಿಂದ ಹಣ ಬಿಡುಗಡೆಯಾಗದೇ ಪ್ರಗತಿಯಲ್ಲಿರುವ ಪ್ರವಾಸೋದ್ಯಮ ಇಲಾಖೆಯ ಕಾಮಗಾರಿಗಳು ಕುಂಠಿತಗೊಂಡಿದ್ದು, ಹಾಗೂ ಇದೇ ವಿಚಾರವಾಗಿ ಆರ್ಥಿಕ ಇಲಾಖೆಯಿಂದ ಕೆಲವೊಂದು ವಿಧಾನಸಭಾ ಕ್ಷೇತ್ರಗಳಿಗೆ ಯಾವುದೇ ಮಾನದಂಡವಿಲ್ಲದೇ ಹೆಚ್ಚುವರಿಯಾಗಿ ಹಣ ಬಿಡುಗಡೆ ಮಾಡಿರುವುದು ಕಂಡು ಬಂದಿರುವ ಹಿನ್ನೆಲೆಯಲ್ಲಿ ಈ ವಿಷಯವನ್ನು ಅನೇಕ ಬಾರಿ ಸದನದಲ್ಲಿ ಪ್ರಸ್ತಾಪಿಸಿದಾಗ ರಾಮನಗರ ಮತ್ತು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಪಟ್ಟಂತೆ ಒಂದೊಂದು ರೀತಿಯ ಉತ್ತರವನ್ನು ಒದಗಿಸುತ್ತಿರುವ ಬಗ್ಗೆ:-

**ಉತ್ತರ**:- ರಾಮನಗರ ಮತ್ತು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ತಲಾ ರೂ. 10.00 ಕೋಟಿಗಳಂತೆ ಒಟ್ಟು ರೂ. 20.00 ಕೋಟಿಗಳ ವಿಶೇಷ ಅನುದಾನವನ್ನು ಮಂಜೂರು ಮಾಡಲು ಆರ್ಥಿಕ ಇಲಾಖೆಯ ದಿ. 14.07.2022 ರ ಹಿಂಬರಹದಲ್ಲಿ ಸಹಮತಿ ನೀಡಲಾಗಿದೆ. ನಂತರದಲ್ಲಿ ಪ್ರವಾಸೋದ್ಯಮ ಇಲಾಖೆಯ ಪ್ರಸ್ತಾವನೆಯನ್ನು ಅನುಸರಿಸಿ, ಅದರಲ್ಲಿನ ಕೋರಿಕೆಯ ಮೇರೆಗೆ ಪ್ರಸ್ತಾವನೆಯನ್ನು ಪರಿಶೀಲಿಸಿ ಸೂಕ್ತ ಹಿಂಬರಹಗಳನ್ನು ಸದರಿ ಇಲಾಖೆಗೆ ನೀಡಲಾಗಿದ್ದು, ಎರಡು ಇಲಾಖೆಗಳ ನಡುವೆ ಸಮನ್ವಯ ಕೊರತೆಯ ಪ್ರಶ್ನೆ ಉದ್ಭವಿಸುವುದಿಲ್ಲ. ಆರ್ಥಿಕ ಇಲಾಖೆಯು ಕಾಲಕಾಲಕ್ಕೆ ಆಯಾಯ ಇಲಾಖೆಗಳು ಕಾಮಗಾರಿಗಳನ್ನು ಕೈಗೆತ್ತಿಕೊಂಡು ಕಾಮಗಾರಿಗಳ ಪ್ರಗತಿಯನುಸಾರ ಆರ್ಥಿಕ ಇಲಾಖೆಗೆ ಸಲ್ಲಿಸುವ ಕೋರಿಕೆಯನ್ನು ಯಾವುದೇ ತಾರತಮ್ಯವಿಲ್ಲದೇ ಆರ್ಥಿಕ ಸ್ಥಿತಿಗತಿಗಳನ್ನು ಅವಲಂಭಿಸಿ ಅನುದಾನವನ್ನು ಬಿಡುಗಡೆ ಮಾಡುತ್ತದೆ.

**ಸಂಖ್ಯೆ:ಆಇ 992 ವೆಚ್ಚ-7/2023**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ